# ಕೈಗಾರಿಕಾ ಕೌಶಲ್ಯ ಉಪನ್ಯಾಸ




ಧಾರವಾಡ,ಸೆ.27: ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಬಹು ರಾಷ್ಟ್ರೀಯ ಕಂಪನಿಗಳು ವಿದ್ಯಾರ್ಥಿಗಳಿಂದ ಬಯಸುತ್ತಿರುವ ಕೌಶಲ್ಯದ ಕುರಿತು ಅರಿವು ಮೂಡಿಸುವ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರಿನ ಕಾಗ್ನಿಜೆಂಟ್ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕುಮಾರಿ. ವೈಷ್ಣವಿ ಜೋಶಿ, ಬೆಂಗಳೂರಿನ ವಿಪ್ರೋ ಸಂಸ್ಥೆಯಲ್ಲಿ ಡಾಟಾ ಎನಾಲಿಸ್ಟ್ ಆಗಿರುವ ಕುಮಾರಿ. ಸುನೀತಾ ಎನ್ ಕೆ ಮತ್ತು ಬೆಂಗಳೂರಿನ ಬೆಂಚ್ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕುಮಾರಿ. ತೇಜಸ್ವಿನಿ ದಿಗೆವಾಡಿ ಆಗಮಿಸಿದ್ದರು.

ಬಹುರಾಷ್ಟ್ರೀಯ ಕಂಪನಿಗಳು ಸಂದರ್ಶನಗಳಲ್ಲಿ ವಿದ್ಯಾರ್ಥಿಗಳಿಂದ ಬಯಸುತ್ತಿರುವ ಸಂವಹನ ಹಾಗೂ ಇತರೆ ಕೌಶಲ್ಯಗಳ ಕುರಿತಾಗಿ ವೈಷ್ಣವಿ ಮಾಹಿತಿ ನೀಡಿದರು. ಸಾಫ್ಟ್ ವೇರ್ ಕಂಪನಿಗಳಲ್ಲಿ ಇಂಜಿನಿಯರ್ ಗಳಿಗೆ ಇರುವ ಅವಕಾಶಗಳ ಕುರಿತಾಗಿ ಸುನಿತಾ ಸಮಗ್ರ ಮಾಹಿತಿ ನೀಡಿದರು. ಪ್ರಸ್ತುತ ಕೈಗಾರಿಕಾ ಕ್ಷೇತ್ರವು ವಿದ್ಯಾರ್ಥಿಗಳು ಕಲಿಯಲೇಬೇಕೆಂದು ಬಯಸುತ್ತಿರುವ ನೂತನ ತಂತ್ರಜ್ಞಾನಗಳಾದ ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ ಹಾಗೂ ಆಟೋಮೆಶನ್ ಗಳ ಕುರಿತಾಗಿ ತೇಜಸ್ವಿನಿ ವಿವರಿಸಿದರು.

ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದ ಕಾರ್ಯನಿರ್ವಹಣೆ ಮತ್ತು ಅಗತ್ಯತೆಯ ಕುರಿತು ತಿಳಿದುಕೊಳ್ಳಲು ಇಂತಹ ಉಪನ್ಯಾಸ ಕಾರ್ಯಕ್ರಮವು ಸಹಕಾರಿಯಾಗುವುದು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ಹೇಳಿದರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್ ಕಾರ್ಯಕ್ರಮ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್, ಡಾ. ವಿನೋದ್ ನಾಯ್ಕ ಉಪಸ್ಥಿತರಿದ್ದರು. 250ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

NEWS PAPER:Sanjevani

# ವಿದ್ಯಾರ್ಥಿಗಳಿಗೆ ಕೈಗಾರಿಕಾ ಕೌಶಲ್ಯದ ಅರಿವು ಮೂಡಿಸಲು ಉಪನ್ಯಾಸ



**ಶಿರಸಿ ಸಮಾಚಾರ ⏭ ಹಳಿಯಾಳ:** ಕೆಎಲ್‌ಎಸ್ ವಿಡಿಐಟಿಯಲ್ಲಿ ಬಹು ರಾಷ್ಟ್ರೀಯ ಕಂಪನಿಗಳು ವಿದ್ಯಾರ್ಥಿಗಳಿಂದ ಬಯಸುತ್ತಿರುವ ಕೌಶಲ್ಯದ ಕುರಿತು ಅರಿವು ಮೂಡಿಸುವ ಉಪನ್ಯಾಸ ಕಾರ್ಯಕ್ರಮವನ್ನು ಸಪ್ಟೆಂಬರ್ 26ರಂದು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರಿನ ಕಾಗ್ನಿಜೆಂಟ್ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕುಮಾರಿ. ವೈಷ್ಣವಿ ಜೋಶಿ, ಬೆಂಗಳೂರಿನ ವಿಪ್ರೋ ಸಂಸ್ಥೆಯಲ್ಲಿ ಡಾಟಾ ಎನಾಲಿಸ್ಟ್ ಆಗಿರುವ ಸುನೀತಾ ಎನ್.ಕೆ. ಮತ್ತು ಬೆಂಗಳೂರಿನ ಬೆಂಚ್ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ತೇಜಸ್ವಿನಿ ದಿಗೆವಾಡಿ ಆಗಮಿಸಿದ್ದರು.

ಬಹುರಾಷ್ಟ್ರೀಯ ಕಂಪನಿಗಳು ಸಂದರ್ಶನಗಳಲ್ಲಿ ವಿದ್ಯಾರ್ಥಿಗಳಿಂದ ಬಯಸುತ್ತಿರುವ ಸಂವಹನ ಹಾಗೂ ಇತರೆ ಕೌಶಲ್ಯಗಳ ಕುರಿತಾಗಿ ವೈಷ್ಣವಿ ಮಾಹಿತಿ ನೀಡಿದರು. ಸಾಫ್ಟ್ ವೇರ್ ಕಂಪನಿಗಳಲ್ಲಿ ಇಂಜಿನಿಯರ್ ಗಳಿಗೆ ಇರುವ ಅವಕಾಶಗಳ ಕುರಿತಾಗಿ ಸುನಿತಾ ಸಮಗ್ರ ಮಾಹಿತಿ ನೀಡಿದರು. ಪ್ರಸ್ತುತ ಕೈಗಾರಿಕಾ ಕ್ಷೇತ್ರವು ವಿದ್ಯಾರ್ಥಿಗಳು ಕಲಿಯಲೇ ಬೇಕೆಂದು ಬಯಸುತ್ತಿರುವ ನೂತನ ತಂತ್ರಜ್ಞಾನಗಳಾದ ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ ಹಾಗೂ ಆಟೋಮೆಶನ್‌ಗಳ ಕುರಿತಾಗಿ ತೇಜಸ್ವಿನಿ ವಿವರಿಸಿದರು. ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದ ಕಾರ್ಯನಿರ್ವಹಣೆ ಮತ್ತು ಅಗತ್ಯತೆಯ ಕುರಿತು ತಿಳಿದುಕೊಳ್ಳಲು ಇಂತಹ ಉಪನ್ಯಾಸ ಕಾರ್ಯಕ್ರಮವು ಸಹಕಾರಿಯಾಗುವುದು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ಹೇಳಿದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್ ಕಾರ್ಯಕ್ರಮ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್, ಡಾ. ವಿನೋದ್ ನಾಯ್ಕ ಉಪಸ್ಥಿತರಿದ್ದರು. 250ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

NEWS PAPER:SirsiSamachar

# ಕೈಗಾರಿಕಾ ಕೌಶಲ ಕುರಿತು ಉಪನ್ಯಾಸ




**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಬಹು ರಾಷ್ಟ್ರೀಯ ಕಂಪನಿಗಳು ವಿದ್ಯಾರ್ಥಿಗಳಿಂದ ಬಯಸುತ್ತಿರುವ ಕೌಶಲ್ಯದ ಕುರಿತು ಅರಿವು ಮೂಡಿಸುವ ಉಪನ್ಯಾಸ ಕಾರ್ಯಕ್ರಮವನ್ನು ಸಪ್ಟೆಂಬರ್ 26ರಂದು ಆಯೋಜಿಸಲಾಗಿತ್ತು. ಕಾರ್ಯ ಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರಿನ ಕಾಗ್ನಿಜೆಂಟ್ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕುಮಾರಿ. ವೈಷ್ಣವಿ ಜೋಶಿ, ಬೆಂಗಳೂರಿನ ವಿಪ್ರೋ ಸಂಸ್ಥೆಯಲ್ಲಿ ಡಾಟಾ ಎನಾಲಿಸ್ಟ್ ಆಗಿರುವ ಕುಮಾರಿ. ಸುನೀತಾ ಎನ್ ಕೆ ಮತ್ತು ಬೆಂಗಳೂರಿನ ಬೆಂಜ್ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕುಮಾರಿ. ತೇಜಸ್ವಿನಿ ದಿಗೆವಾಡಿ ಆಗಮಿಸಿದ್ದರು.

ಬಹುರಾಷ್ಟ್ರೀಯ ಕಂಪನಿಗಳು ಸಂದರ್ಶನಗಳಲ್ಲಿ ವಿದ್ಯಾರ್ಥಿಗಳಿಂದ ಬಯಸುತ್ತಿರುವ ಸಂವಹನ ಹಾಗೂ ಇತರೆ ಕೌಶಲ್ಯಗಳ ಕುರಿತಾಗಿ ವೈಷ್ಣವಿ ಮಾಹಿತಿ ನೀಡಿದರು. ಸಾಫ್ಟ್ ವೇರ್ ಕಂಪನಿಗಳಲ್ಲಿ ಇಂಜಿನಿಯರ್ ಗಳಿಗೆ ಇರುವ ಅವಕಾಶಗಳ ಕುರಿತಾಗಿ ಸುನಿತಾ ಸಮಗ್ರ ಮಾಹಿತಿ ನೀಡಿದರು. ಪ್ರಸ್ತುತ ಕೈಗಾರಿಕಾ ಕ್ಷೇತ್ರವು ವಿದ್ಯಾರ್ಥಿಗಳು ಕಲಿಯಲೇ ಬೇಕೆಂದು ಬಯಸುತ್ತಿರುವ ನೂತನ ತಂತ್ರಜ್ಞಾನಗಳಾದ ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ ಹಾಗೂ ಆಟೋಮೆಶನ್ ಗಳ ಕುರಿತಾಗಿ ತೇಜಸ್ವಿನಿ ವಿವರಿಸಿದರು. ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದ ಕಾರ್ಯನಿರ್ವಹಣೆ ಮತ್ತು ಅಗತ್ಯತೆಯ ಕುರಿತು ತಿಳಿದುಕೊಳ್ಳಲು ಇಂತಹ ಉಪನ್ಯಾಸ ಕಾರ್ಯಕ್ರಮವು ಸಹಕಾರಿಯಾಗುವುದು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ಹೇಳಿದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್ ಕಾರ್ಯಕ್ರಮ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್, ಡಾ. ವಿನೋದ್ ನಾಯ್ಕ ಉಪಸ್ಥಿತರಿದ್ದರು. 250ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

NEWS PAPER:Lokadwani

ಬುಧವಾರ
27, ಸೆಪ್ಟೆಂಬರ್ 2023

# ಕೈಗಾರಿಕಾ ಕೌಶಲ್ಯ ಕುರಿತು ಉಪನ್ಯಾಸ

**ಕೊಂಕಣವಾಹಿನಿ ನ್ಯೂಸ್,**

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಬಹು ರಾಷ್ಟ್ರೀಯ ಕಂಪನಿಗಳು ವಿದ್ಯಾರ್ಥಿಗಳಿಂದ ಬಯಸುತ್ತಿರುವ ಕೌಶಲ್ಯದ ಕುರಿತು ಅರಿವು ಮೂಡಿಸುವ ಉಪನ್ಯಾಸ ಕಾರ್ಯಕ್ರಮವನ್ನು ಮಂಗಳವಾರ ಆಯೋಜಿಸಲಾಗಿತ್ತು.




ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರಿನ ಕಾಗ್ನಿಜೆಂಟ್ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈಷ್ಣವಿ ಜೋಶಿ, ಬೆಂಗಳೂರಿನ ವಿಪ್ರೋ ಸಂಸ್ಥೆಯಲ್ಲಿ ಡಾಟಾ ಎನಾಲಿಸ್ಟ್ ಆಗಿರುವ ಸುನೀತಾ ಎನ್ ಕೆ ಮತ್ತು ಬೆಂಗಳೂರಿನ ಬೆಂಜ್ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ತೇಜಸ್ವಿನಿ ದಿಗೆವಾಡಿ ಆಗಮಿಸಿದ್ದರು.

ಬಹುರಾಷ್ಟ್ರೀಯ ಕಂಪನಿಗಳು ಸಂದರ್ಶನಗಳಲ್ಲಿ ವಿದ್ಯಾರ್ಥಿಗಳಿಂದ ಬಯಸುತ್ತಿರುವ ಸಂವಹನ ಹಾಗೂ ಇತರೆ ಕೌಶಲ್ಯಗಳ ಕುರಿತಾಗಿ ವೈಷ್ಣವಿ ಮಾಹಿತಿ ನೀಡಿದರು. ಸಾಫ್ಟ್ ವೇರ್ ಕಂಪನಿಗಳಲ್ಲಿ ಇಂಜಿನಿಯರ್ ಗಳಿಗೆ ಇರುವ ಅವಕಾಶಗಳ ಕುರಿತಾಗಿ ಸುನಿತಾ ಸಮಗ್ರ ಮಾಹಿತಿ ನೀಡಿದರು. ಪ್ರಸ್ತುತ ಕೈಗಾರಿಕಾ ಕ್ಷೇತ್ರವು ವಿದ್ಯಾರ್ಥಿಗಳು ಕಲಿಯಲೇ ಬೇಕೆಂದು ಬಯಸುತ್ತಿರುವ ನೂತನ ತಂತ್ರಜ್ಞಾನಗಳಾದ ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ ಹಾಗೂ ಆಟೋಮೆಶನ್ ಗಳ ಕುರಿತಾಗಿ ತೇಜಸ್ವಿನಿ ವಿವರಿಸಿದರು. ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದ ಕಾರ್ಯನಿರ್ವಹಣೆ ಮತ್ತು ಅಗತ್ಯತೆಯ ಕುರಿತು ತಿಳಿದುಕೊಳ್ಳಲು ಇಂತಹ ಉಪನ್ಯಾಸ ಕಾರ್ಯಕ್ರಮವು ಸಹಕಾರಿಯಾಗುವುದು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ಹೇಳಿದರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್ ಕಾರ್ಯಕ್ರಮ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್, ಡಾ. ವಿನೋದ್ ನಾಯ್ಕ ಉಪಸ್ಥಿತರಿದ್ದರು. 250ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

NEWS PAPER:KonkanVahini

# ಕೆಎಲ್‌ಎಸ್ ವಿಡಿಐಟಿಯಲ್ಲಿ ವಿದ್ಯಾರ್ಥಿಗಳಿಗೆ ಕೌಶಲ್ಯದ ಅರಿವು



**ಹಳಿಯಾಳ:** ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಬಹು ರಾಷ್ಟ್ರೀಯ ಕಂಪನಿಗಳು ವಿದ್ಯಾರ್ಥಿಗಳಿಂದ ಬಯಸುತ್ತಿರುವ ಕೌಶಲ್ಯದ ಕುರಿತು ಅರಿವು ಮೂಡಿಸುವ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಸಂಪನ್ಮೂಲವ್ಯಕ್ತಿಗಳಾಗಿ ಬೆಂಗಳೂರಿನ ಕಾಗ್ನಿಜೆಂಟ್ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈಷ್ಣವಿ ಜೋಶಿ, ಬೆಂಗಳೂರಿನ ವಿಪ್ರೋ ಸಂಸ್ಥೆಯಲ್ಲಿ ಡಾಟಾ ಎನಾಲಿಸ್ಟ್ ಆಗಿರುವ ಸುನೀತಾ ಎನ್.ಕೆ. ಮತ್ತು ಬೆಂಗಳೂರಿನ ಬೆಂಜ್ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ತೇಜಸ್ವಿನಿ ದಿಗೆವಾಡಿ ಆಗಮಿಸಿದ್ದರು.

ಬಹುರಾಷ್ಟ್ರೀಯ ಕಂಪನಿಗಳು ಸಂದರ್ಶನಗಳಲ್ಲಿ ವಿದ್ಯಾರ್ಥಿಗಳಿಂದ ಬಯಸುತ್ತಿರುವ ಸಂವಹನ ಹಾಗೂ ಇತರೆ ಕೌಶಲ್ಯಗಳ ಕುರಿತಾಗಿ ವೈಷ್ಣವಿ ಮಾಹಿತಿ ನೀಡಿದರು. ಸಾಫ್ಟ್ ವೇರ್ ಕಂಪನಿಗಳಲ್ಲಿ ಎಂಜಿನಿಯರ್‌ಗಳಿಗೆ ಇರುವ ಅವಕಾಶಗಳ ಕುರಿತಾಗಿ ಸುನಿತಾ ಸಮಗ್ರ ಮಾಹಿತಿ ನೀಡಿದರು. ಪ್ರಸ್ತುತ ಕೈಗಾರಿಕಾ ಕ್ಷೇತ್ರವು ವಿದ್ಯಾರ್ಥಿಗಳು ಕಲಿಯಲೇ ಬೇಕೆಂದು ಬಯಸುತ್ತಿರುವ ನೂತನ ತಂತ್ರಜ್ಞಾನಗಳಾದ ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ ಹಾಗೂ ಆಟೋಮೆಶನ್‌ಗಳ ಕುರಿತಾಗಿ ತೇಜಸ್ವಿನಿ ವಿವರಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದ ಕಾರ್ಯನಿರ್ವಹಣೆ ಮತ್ತು ಅಗತ್ಯತೆಯ ಕುರಿತು ತಿಳಿದುಕೊಳ್ಳಲು ಇಂತಹ ಉಪನ್ಯಾಸ ಕಾರ್ಯಕ್ರಮವು ಸಹಕಾರಿಯಾಗುವುದು ಎಂದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥ ಡಾ. ಮಹೇಂದ್ರ ದೀಕ್ಷಿತ್ ಕಾರ್ಯಕ್ರಮ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್, ಡಾ. ವಿನೋದ್ ನಾಯ್ಕ ಉಪಸ್ಥಿತರಿದ್ದರು. 250ಕ್ಕೂ ಅಧಿಕ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

NEWS PAPER:HosaDiganta